**ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಇಂಡಿ**

**ಕ್ರಿ.ಮಿ. ನಂ:09/2026**

**ಪಿ.ಡಬ್ಲ್ಯು-1**

**ದಿ:11-05-2026 ರ ಮೇರೆಗೆ ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನ ಬೋದಿಸಲಾಯಿತು.**

**ಮುಂದುವರೆದ ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಶ್ರೀ:ಡಿ.ಎಸ್.ಎಮ್. ವಕೀಲರಿಂದ:**

ಅಲಭ್ಯ ಪ್ರಮಾಣ ಪತ್ರವನ್ನು ಹಾಜರುಮಾಡಿದ್ದು ಅದನ್ನು ನಿ.ಪಿ.1 ಎಂದು, 4 ಆಧಾರ ಕಾರ್ಡಗಳನ್ನು ಹಾಜರುಮಾಡಿದ್ದು ಅವುಗಳನ್ನು ಕ್ರಮವಾಗಿ ನಿ.ಪಿ.2 ರಿಂದ 5 ಎಂದು, ದೃಡಿಕರಣ ಪ್ರಮಾಣ ಪತ್ರವನ್ನು ಹಾಜರುಮಾಡಿದ್ದು ಅದನ್ನು ನಿ.ಪಿ.6 ಎಂದು, 2 ಕನ್ನಡ ದಿನಪತ್ರಿಕೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿ.ಪಿ.7 ಮತ್ತು 8 ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಎದುರುದಾರರ ಪರ ಶ್ರೀ.ಎ.ಜಿ.ಪಿ.ವಕೀಲರಿಂದಃ**

ನನ್ನ ತಾಯಿಯ ಹೆಸರು ವಿಮಲಾ ಅಪ್ಪಾಸಾಬ ಪವಾರ. ಸದರಿಯವರಿಗೆ 4 ಜನ ಮಕ್ಕಳು. ನನ್ನ ತಾಯಿ ಮೈಲಾರ ಗ್ರಾಮದಲ್ಲಿ ಅಪಘಾತದಲ್ಲಿ ಮರಣ ಹೊಂದಿರುತ್ತಾರೆ. ಅಪಘಾತವಾದ ನಂತರ ಝಳಕಿ ಪೊಲೀಸ್ ಠಾಣೆಯಲ್ಲಿ ಪಿರ್ಯಾದಿಯನ್ನು ನೀಡಿರುತ್ತೇನೆ. ಸದರಿ ಝಳಕಿ ಪೊಲೀಸ್ ಠಾಣೆಯಲ್ಲಿ ದಾಖಲು ಮಾಡಿದ FIR ನ ದೃಡಿಕೃತ ನಕಲನ್ನು ನ್ಯಾಯಾಲಯಕ್ಕೆ ಹಾಜರುಮಾಡಿರುತ್ತೇನೆ. ಸದರಿ ನನ್ನ ತಾಯಿ ದಿಃ18.06.2015 ರಂದು ಮರಣ ಹೊಂದಿರುತ್ತಾರೆ. ನನ್ನ ತಾಯಿ ಮರಣ ಹೊಂದಿದ ನಂತರ ಎದುರುದಾರರ ಕಚೇರಿಗೆ ಮರಣ ದಾಖಲೆ ಕುರಿತು ಅರ್ಜಿ ನೀಡಿರುತ್ತೇವೆ. ಸದರಿ ಅರ್ಜಿಯನ್ನು ನ್ಯಾಯಾಲಯಕ್ಕೆ ಹಾಜರುಮಾಡಿರುತ್ತೇನೆ ಆದರೆ ದಿನಾಂಕ ಗೊತ್ತಿಲ್ಲ. ನನ್ನ ತಾಯಿಯು ಅಪಘಾತದಲ್ಲಿ ಮರಣ ಹೊಂದಿರುತ್ತಾರೆ ಮತ್ತು ಅದಕ್ಕೆ ಸಂಬಂಧಿಸಿದಂತೆ FIR ಆಗಿರುತ್ತದೆ ಮತ್ತು ಅದನ್ನು ನ್ಯಾಯಾಲಯಕ್ಕೆ ಹಾಜರುಮಾಡಿರುತ್ತೇನೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಯಾವುದೇ ದಾಖಲೆಗಳನ್ನು ಹಾಜರುಮಾಡದೇ ಸುಳ್ಳು ಕೇಸನ್ನು ದಾಖಲಿಸಿ ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃಇಲ್ಲಃ**

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು)

**ಓ.ಹೇ.ಕೇ. ಸರಿ ಇದೆ.**

**ಸಹಿ/-**

**ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಮ್.ಎಫ್.ಸಿ.ಇಂಡಿ.**